## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1366 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ |
| ಉತ್ತರಿಸುವ ದಿನಾಂಕ | : | 22-08-2025. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಸಂಬಂಧ ನೇಮಕಗೊಂಡ ನ್ಯಾ. ನಾಗಮೋಹನ್ ದಾಸ್ ವರದಿ ಸಲ್ಲಿಕೆಯಾಗಿದೆಯೇ; ಆಗಿದ್ದಲ್ಲಿ, ಯಾವ ದಿನಾಂಕದಂದು ಸಲ್ಲಿಕೆಯಾಗಿದೆ ಮತ್ತು ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; | ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧ ಸರ್ಕಾರದಿಂದ ನೇಮಿಸಲಾದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ\|\|ಹೆಚ್.ಎನ್.ನಾಗಮೋಹನ್ ದಾಸ್ ರವರ ಏಕಸದಸ್ಯ ವಿಚಾರಣಾ ಆಯೋಗವು ದಿನಾಂಕ:-04-08-2025 ರಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿ ಕುರಿತು ದಿನಾಂಕ:19-08-2025 ರಂದು ಜರುಗಿದ ವಿಶೇಷ ಸಚಿವ ಸಂಪುಟ ಸಭೆಯ ನಿರ್ಧಾರಗಳನ್ನು ಈಗಾಗಲೇ ಸನ್ಮಾನ್ಯ ಮುಖ್ಯಮಂತ್ರಿಯವರು ವಿಧಾನ ಮಂಡಲದಲ್ಲಿ ಹೇಳಿಕೆ ನೀಡಿರುತ್ತಾರೆ. |
| ಆ) | ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 10 ತಿಂಗಳಿಂದ ಪರಿಶಿಷ್ಟ ಜಾತಿ ಮೀಸಲು ವರ್ಗೀಕರಣದ ಹಿನ್ನಲೆಯಲ್ಲಿ ನೇಮಕಾತಿಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು; | |
| ಇ) | ರಾಜ್ಯ ಸರ್ಕಾರದ ಶಿಕ್ಷಣ, ಕೃಷಿ ಹಾಗೂ ವಿವಿಧ ಇಲಾಖೆಗಳಲ್ಲಿ ನೇಮಕ ಹೊಂದಬೇಕಾದ ಸುಮಾರು 60 ಸಾವಿರ ಹುದ್ದೆಗಳ ಪ್ರಕ್ರಿಯೆಯು ಸ್ಥಗಿತಗೊಂಡಿರುವುದರಿಂದ ರಾಜ್ಯದ ಶೈಕ್ಷಣಿಕ, ಆರ್ಥಿಕ ಮತ್ತು ಆಡಳಿತಾತ್ಮಕ ಕಾರ್ಯಗಳು ಕುಂಠಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಇಲಾಖೆಗಳ ನೇಮಕಾತಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳೇನು; | ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ:25.11.2024 ರಲ್ಲಿ ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. |
| ಈ) | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 15 ವರ್ಷಗಳಿಂದ ವಿವಿಧ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಒಳ ಮೀಸಲಾತಿ ವರ್ಗೀಕರಣ ಹಿನ್ನೆಲೆಯಲ್ಲಿ ತುಂಬಿಕೊಳ್ಳದೆ ಇರುವಂತಹ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | |

| | | |
|---|---|---|
| ಉ) | ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮಸ್ಯೆಯನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಬಗೆಹರಿಸಿ ನೇಮಕಾತಿಗೆ ಅವಕಾಶ ಮಾಡಿಕೊಡುತ್ತದೆ? | ನೇಮಕಾತಿ ಪ್ರಕ್ರಿಯೆ ಬಗ್ಗೆ ಸದ್ಯದಲ್ಲಿಯೇ ಕ್ರಮವಹಿಸಲಾಗುವುದು. |

**No: SWD/470/SLP/2025**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.